ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 504

ಸದಸ್ಯರ ಹೆಸರು : ಡಾ.ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 21.02.2022

ಉತ್ತರಿಸುವ ಸಚಿವರು : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ)	ಕರ್ನಾಟಕ ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆ ಪ್ರಾರಂಭಗೊಂಡಿದ್ದು ಯಾವಾಗ;	ಕರ್ನಾಟಕ ರಾಜ್ಯದಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯನ್ನು 2001-2002ನೇ ಸಾಲಿನಿಂದ ಪ್ರಾರಂಭಿಸಲಾಗಿದೆ.
ಆ)	ಈ ಯೋಜನೆಯ ಉದ್ದೇಶವೇನು;	**ಮಧ್ಯಾಹ್ನ ಉಪಹಾರ ಯೋಜನೆಯ ಉದ್ದೇಶಗಳು ಕೆಳಕಂಡಂತಿದೆ** 1) ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ತರಗತಿ 1 ರಿಂದ 10ರ ವರೆಗೆ ವ್ಯಾಸಂಗ ಮಾಡುತ್ತಿರುವ ಮಕ್ಕಳ ದಾಖಲಾತಿ ಹಾಗೂ ಹಾಜರಾತಿಯನ್ನು ಹೆಚ್ಚಿಸುವುದು. 2) ಶೈಕ್ಷಣಿಕ ವರ್ಷದಲ್ಲಿ ಮಧ್ಯೆ ಶಾಲೆಯನ್ನು ತೊರೆಯದಂತೆ ತಡೆಯುವುದು. 3) ಪೌಷ್ಠಿಕವಾದ ಆಹಾರವನ್ನು ನೀಡುವುದರ ಮೂಲಕ ಶಾಲಾ ಮಕ್ಕಳಲ್ಲಿ ಅಪೌಷ್ಠಿಕತೆಯಿಂದ ಕಂಡುಬರುವ ರಕ್ತಹೀನತೆ, ದೃಷ್ಟಿದೋಷ ನಿವಾರಿಸಿ ಆರೋಗ್ಯವನ್ನು ವೃದ್ಧಿಗೊಳಿಸುವುದು. 4) ನಿರಂತರ ಕಲಿಕೆಯೊಂದಿಗೆ ಶಾಲಾ ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸುವುದು. 5) ಸಾಮಾಜಿಕ ಸಮಾನತೆಯನ್ನು ಅಭಿವೃದ್ಧಿಗೊಳಿಸಿ ತನ್ಮೂಲಕ ರಾಷ್ಟ್ರೀಯ ಭಾವೈಕ್ಯತೆಯನ್ನು ಮಕ್ಕಳಲ್ಲಿ ಮೂಡಿಸುವುದು.

		6) ಬರಪೀಡಿತ ಪ್ರದೇಶಗಳನ್ನಾಗಿ ಘೋಷಿಸುವ ತಾಲ್ಲೂಕುಗಳಲ್ಲಿ ಬೇಸಿಗೆ ರಜಾ ದಿನಗಳಲ್ಲಿ ಮಧ್ಯಾಹ್ನ ಬಿಸಿಯೂಟವನ್ನು ಶಾಲಾ ಮಕ್ಕಳಿಗೆ ನೀಡಿ ಪೌಷ್ಠಿಕತೆಯನ್ನು ಕಾಪಾಡುವುದು.
ಇ)	ಮೇಲ್ಕಂಡ ಯೋಜನೆಗೆ ವಾರ್ಷಿಕ ಸರ್ಕಾರ ಖರ್ಚು ಮಾಡುತ್ತಿರುವ ವೆಚ್ಚವೆಷ್ಟು;	2020-21ನೇ ಸಾಲಿನಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯಡಿ **ರೂ 1452.73 ಕೋಟಿಗಳನ್ನು** ಖರ್ಚು ಮಾಡಲಾಗಿದೆ.
ಈ)	ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಯೂಟ ಯೋಜನೆಯನ್ನು ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು?	ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ವಿಸ್ತರಿಸುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದೆ ಇರುವುದಿಲ್ಲ.

ಇಪಿ 11 ಎಂಎಂಎಸ್ 2022

(ಬಿ.ಸಿ. ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ

ಸಕಾಲ ಸಚಿವರು.